# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : 1502 |
| ಉತ್ತರಿಸಬೇಕಾದ ದಿನಾಂಕ | : 18.12.2025 |
| ಸದಸ್ಯರ ಹೆಸರು | : ಶ್ರೀ ಭೀಮರಾವ್ ಬಸವರಾಜ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ಸಚಿವರು | : ಮಾನ್ಯ ಮುಖ್ಯಮಂತ್ರಿಯವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಬೀದರ್ ಜಿಲ್ಲೆ ಹುಮ್ನಾಬಾದ್ ತಾಲ್ಲೂಕಿನಲ್ಲಿ ಕ್ರೀಡಾಂಗಣ ಇಲ್ಲದೇ ಯುವಜನತೆಗೆ ಮತ್ತು ಕ್ರೀಡಾಪಟುಗಳಿಗೆ ತೊಂದರೆ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ಇದ್ದಲ್ಲಿ, ಮಾಹಿತಿ ನೀಡುವುದು) | ಬೀದರ್ ಜಿಲ್ಲೆ ಹುಮ್ನಾಬಾದ್ ತಾಲ್ಲೂಕು ಕ್ರೀಡಾಂಗಣವನ್ನು ಹುಮ್ನಾಬಾದ್‌ನಲ್ಲಿ 8 ಎಕರೆ ನಿವೇಶನದಲ್ಲಿ ನಿರ್ಮಿಸಲಾಗಿದ್ದು, ಸದರಿ ಕ್ರೀಡಾಂಗಣದಲ್ಲಿ 400 ಮೀಟರ್ ಮಣ್ಣಿನ ಅಥ್ಲೆಟಿಕ್ ಟ್ರ್ಯಾಕ್, ವಾಲಿಬಾಲ್, ಫುಟ್‌ಬಾಲ್ ಮತ್ತಿತರ ಅಂಕಣಗಳನ್ನು ನಿರ್ಮಿಸಲಾಗಿರುತ್ತದೆ. ಅಲ್ಲದೇ, ಸದರಿ ತಾಲ್ಲೂಕು ಕ್ರೀಡಾಂಗಣದಲ್ಲಿ ಒಳಾಂಗಣ ಶಟಲ್ ಬ್ಯಾಡ್ಮಿಂಟನ್ ಅಂಕಣವನ್ನು ನಿರ್ಮಿಸಲಾಗಿದ್ದು, ಕ್ರೀಡಾಪಟುಗಳ ಬಳಕೆಯಲ್ಲಿರುತ್ತದೆ. |
| ಆ) | ಹೊಸ ಕ್ರೀಡಾಂಗಣ ನಿರ್ಮಾಣಕ್ಕೆ ಜಿಲ್ಲೆಯಿಂದ ಪ್ರಸ್ತಾವನೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು; | ಹುಮ್ನಾಬಾದ್ ತಾಲ್ಲೂಕಿನಲ್ಲಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ವತಿಯಿಂದ ಈಗಾಗಲೇ ತಾಲ್ಲೂಕು ಕ್ರೀಡಾಂಗಣ ನಿರ್ಮಿಸಲಾಗಿರುವ ಹಿನ್ನಲೆಯಲ್ಲಿ ಸದರಿ ತಾಲ್ಲೂಕಿನಲ್ಲಿ ಮತ್ತೊಂದು ಹೊಸ ಕ್ರೀಡಾಂಗಣ ನಿರ್ಮಿಸುವ ಪ್ರಸ್ತಾವನೆ ಪ್ರಸ್ತುತ ಸರ್ಕಾರದ ಮುಂದಿರುವುದಿಲ್ಲ. |
| ಇ) | ಸರ್ಕಾರ ಹೊಸ ಕ್ರೀಡಾಂಗಣ ನಿರ್ಮಾಣಕ್ಕೆ ಕ್ರಮ ಕೈಗೊಂಡಿದೆಯೇ? (ನಿರ್ಮಾಣ ಕಾಮಗಾರಿ ವಿವರ ನೀಡುವುದು) | ಮೇಲಿನ ಉತ್ತರದಿಂದಾಗಿ ಈ ಪ್ರಶ್ನೆಯು ಉದ್ಭವಿಸುವುದಿಲ್ಲ. |

**ವೈಎಸ್ ಡಿ-ಇಬಿಬಿ/167/2025**

(ಸಿದ್ದರಾಮಯ್ಯ)
ಮುಖ್ಯಮಂತ್ರಿ